

* ಸೋಂಕು ತಗಲಿದ ವ್ಯಕ್ತಿಯ ಜೊತೆ ಸಂಪರ್ಕ ಬೆಳೆಸಿದಾಗ ರೋಗ ಹರಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಈ ಕಾರಣದಿಂದಲೇ ರೋಗ ಪೀಡಿತ ವ್ಯಕ್ತಿಯನ್ನು ವಿಶೇಷವಾದ ಕೋಣೆಗಳಲ್ಲಿರಿಸಿ ಬೇರೆ ಯಾರಿಗೂ ಸಂಪರ್ಕಕ್ಕೆ ಬರದಂತೆ ತಡೆಯುವುದು ಅತೀ ಅವಶ್ಯಕ. ರೋಗಿಯಿಂದ ವೈದ್ಯರಿಗೆ ಮತ್ತೂ ದಾದಿಯರಿಗೂ ಈ ರೋಗ ಹರಡುವ ಸಾಧ್ಯತೆ ಇದೆ.

## ಪತ್ತೆ ಹಚ್ಚುವುದು ಹೇಗೆ?

ರೋಗ ಪೀಡಿತ ವ್ಯಕ್ತಿಯ ಮೂಗಿನ ಮತ್ತು ಗಂಟಲಿನಲ್ಲಿ ಸ್ರವಿಸಿದ ದ್ರವ್ಯವನ್ನು ಪರೀಕ್ಷೆ ಮುಖಾಂತರ ವೈರಾಣು ಪತ್ತೆ ಮಾಡಲಾಗುತ್ತದೆ. ಮೆದುಳಿನ ದ್ರವ, ರಕ್ತ, ಮೂತ್ರದಿಂದಲೂ ವೈರಾಣುವನ್ನು ಪತ್ತೆ ಹಚ್ಚಬಹುದು.

## ಚಿಕಿತ್ಸೆ ಏನು?

ಎಲ್ಲಾ ಜ್ವರಗಳಿಗೆ ಚಿಕಿತ್ಸೆ ನೀಡಿದಂತೆ, ಜ್ವರವನ್ನು ನಿಯಂತ್ರಿಸಲಾಗುತ್ತದೆ. ಹೆಚ್ಚು ದ್ರವಾಹಾರ ನೀಡಿ ರೋಗಿಗೆ ನಿರ್ಜಲೀಕರಣವಾಗದಂತೆ ತಡೆಯಲಾಗುತ್ತದೆ. ವೈರಸ್ ತಗಲಿದ 2 ದಿನಗಳ ಒಳಗೆ ಪ್ರಾಥಮಿಕ ಚಿಕಿತ್ಸೆ ಪಡೆದರೆ ರೋಗಿ ಬದುಕುವ ಸಾಧ್ಯತೆ ಹೆಚ್ಚಾಗಿರುತ್ತದೆ. ರೋಗ ಬಹುಬೇಗನೆ ಇತರರಿಗೆ ಹರಡುವುದರಿಂದ ರೋಗಿಯನ್ನು ಬೇರೆಯೇ ಕೋಣೆಯಲ್ಲಿರಿಸಿ ಚಿಕಿತ್ಸೆ ನೀಡಲಾಗುತ್ತದೆ. ಯಾರ ಸಂಪರ್ಕಕ್ಕೆ ಬಾರದಂತೆ ನೋಡಿಕೊಳ್ಳಲಾಗುತ್ತದೆ. ವೈದ್ಯರು ಮತ್ತು ದಾದಿಯರು ವಿಶೇಷ ಮತುವರ್ಜಿ ವಹಿಸಬೇಕು ಇಲ್ಲವಾದ್ದಲ್ಲಿ ವೈದ್ಯರಿಗೂ ರೋಗ ಹರಡಬಹುದು. ಕೈ ಚೀಲ, ಮುಖದ ಮಾಸ್ಕ್ ಮತ್ತು ತಲೆಗವಚ ಧರಿಸಿಯೇ ರೋಗಿಯನ್ನು ಸ್ಪರ್ಶಿಸಬೇಕು.

## ತಡೆಗಟ್ಟುವುದು ಹೇಗೆ?

ನಿಫಾ ವೈರಾಣು ಸೋಂಕಿತ ವ್ಯಕ್ತಿಯಿಂದ ದೂರವಿರಬೇಕು. ಸ್ಪರ್ಶ, ದೈಹಿಕ ಸಂಪರ್ಕ ಮಾಡಬಾರದು. ಪ್ರತಿ ಬಾರಿಯೂ ಶಂಕಿತ ವ್ಯಕ್ತಿಯನ್ನು ಮುಟ್ಟಿದ ಬಳಿಕ ಸೋಪಿನ ದ್ರಾವಣ ಬಳಸಿ ಕೈ ಚೆನ್ನಾಗಿ ತೊಳೆಯಬೇಕು.

ಎಲ್ಲೆಂದರಲ್ಲಿ ಸೀನಬೇಡಿ. ಸೀನುವಾಗ ಮುಖಕ್ಕೆ ಕರವಸ್ತ್ರವನ್ನು ಅಡ್ಡವಾಗಿ ಹಿಡಿದುಕೊಳ್ಳಿ. ಎಲ್ಲೆಂದರಲ್ಲಿ ಉಗುಳಬೇಡಿ. ಹೀಗೆ ಮಾಡುವುದರಿಂದ ರೋಗ ಸುಲಭವಾಗಿ ಹರಡುವ ಸಾಧ್ಯತೆ ಇರುತ್ತದೆ.

ರೋಗ ಪೀಡಿತ ಪ್ರದೇಶಕ್ಕೆ ಪ್ರಯಾಣ ಮಾಡುವುದು ಒಳ್ಳೆಯದಲ್ಲ.

ರೋಗ ಪೀಡಿತ ವ್ಯಕ್ತಿಯನ್ನು ಬೇರೆಯಾದ ಕೋಣೆಯಲ್ಲಿರಿಸಿ ಬೇರೆಯವರ ಸಂಪರ್ಕಕ್ಕೆ ಬಾರದಂತೆ ನೋಡಿಕೊಳ್ಳಬೇಕು.

ಶಂಕಿತ ರೋಗಪೀಡಿತ ಹಂದಿಗಳ ನಿರ್ಮೂಲನ ಮಾಡಬೇಕು.

ಜ್ವರ ಬಂದಾಗ ನಿರ್ಲಕ್ಷಿಸದೆ ಕೂಡಲೇ ವೈದ್ಯರ ಬಳಿ ಸೇರಿಸಿ ಚಿಕಿತ್ಸೆ ಪಡೆಯಬೇಕು.

ಹಣ್ಣನ್ನು ಚೆನ್ನಾಗಿ ತೊಳೆದು, ಸಿಪ್ಪೆ ತೆಗೆದು ತಿನ್ನಬೇಕು. ಹಸಿ ಹಣ್ಣನ್ನು ತಿನ್ನುವುದರ ಬದಲು ಹಣ್ಣನ್ನು ಚೆನ್ನಾಗಿ ಬೇಯಿಸಿ ಬಳಸಬೇಕು.

ದೋಷಪೂರಿತ ಖರ್ಜೂರ ಹಣ್ಣು, ನೆಲದ ಮೇಲೆ ಬಿದ್ದ ಹಣ್ಣುಗಳು ಮತ್ತು ಬಾವಲಿ ಹಾಗೂ ಇತರ ಪ್ರಾಣಿಗಳು ಕಚ್ಚಿದ ಹಣ್ಣುಗಳನ್ನು ತಿನ್ನಬೇಡಿ.

ಪಾಮ್ ಆಯಿಲ್ (ತಾಳೆ ಎಣ್ಣೆ) ಬಳಸುವವರು ಚೆನ್ನಾಗಿ ಕುದಿಸಿ ಬಳಸಿ.

ನಿಫಾ ವೈರಾಣುವನ್ನು ತುಂಬಾ ಸುಲಭವಾಗಿ ಬ್ಲೀಚಿಂಗ್ ಮತ್ತು ಸೋಡಿಯಂ ಹೈಪೋಕ್ಲೋರೈಟ್ ದ್ರಾವಣದಿಂದ ನಾಶಪಡಿಸಬಹುದು. ಈ ರೋಗ ತಡೆಗಟ್ಟಲು ಯಾವುದೇ ಲಸಿಕೆ ಇಲ್ಲದ ಕಾರಣ ರೋಗ ಬರದಂತೆ ಮುಂಜಾಗೂರಕತೆ ವಹಿಸಲೇ ಬೇಕಾಗಿದೆ.

'ರಿಬಾವಿರಿನ್' ಎಂಬ ಔಷಧಿಯನ್ನು ವೈರಾಣುವಿನ ವಿರುದ್ಧ ಉಪಯೋಗಿಸಲಾಗಿದ್ದು, ಹೆಚ್ಚಿನ ಅನೂಕೂಲವಾಗಿಲ್ಲ ಎಂಬುದು ತಜ್ಞರ ಅಭಿಮತ. ಆದಷ್ಟು ಬೇಗ ರೋಗವನ್ನು ಪತ್ತೆ ಹಚ್ಚಿ, ರೋಗಿಯನ್ನು ತೀವ್ರ ನಿಗಾ ಘಟಕದಲ್ಲಿರಿಸಿ ಸಕಾಲದಲ್ಲಿ ಸೂಕ್ತ ಚಿಕಿತ್ಸೆ ನೀಡಿದ್ದಲ್ಲಿ ಜೀವಕ್ಕೆ ಬರುವ ಕುತ್ತನ್ನು ತಪ್ಪಿಸಬಹುದು.

## ಜಾಗತಿಕ ಮಟ್ಟದಲ್ಲಿ ಈ ಜ್ವರದ ದಾಖಲೆ

1998ರಲ್ಲಿ ಮಲೇಷಿಯಾದ ಒಂದು ಸಣ್ಣ ಹಳ್ಳಿಯಾದ 'ಕಾಮ್ಪುಂಗ್ ಸುಂಗೈ ನಿಫಾ' ಎಂಬ ಜಾಗದಲ್ಲಿ ಮೊದಲು ಕಾಣಿಸಿಕೊಂಡ ಕಾರಣದಿಂದ 'ನಿಫಾ ವೈರಸ್' ಎಂದು ಕರೆಯಲ್ಪಡುತ್ತದೆ.

ಈ ಹಳ್ಳಿಯ ಹಂದಿ ಸಾಕುವ ರೈತರಲ್ಲಿ ಮೊದಲು ಈ ಜ್ವರ ಕಾಣಿಸಿಕೊಂಡು ಮೆದುಳಿನ ಊರಿಯೂತ ಮತ್ತು ಉಸಿರಾಟದ ತೊಂದರೆ ಉಂಟು ಮಾಡಿ, ನೂರಾರು ಮಂದಿ ಅಸು ನೀಗಿದ್ದರು. ಅಂದಾಜು 200 ಮಂದಿಗೆ ರೋಗ ತಗುಲಿ 100 ಮಂದಿ ಅಸು ನೀಗಿದ್ದರು. ರೋಗ ಪೀಡಿತ ಲಕ್ಷಾಂತರ ಹಂದಿಗಳನ್ನು ನಿರ್ಮೂಲನ ಮಾಡಿ ರೋಗವನ್ನು ಹತೋಟಿಗೆ ತರಲಾಗಿತ್ತು. 2001ರಲ್ಲಿ ಭಾರತ ದೇಶದ ಪಶ್ಚಿಮ ಬಂಗಾಳದ ಸಿಲಿಗುರಿಯಲ್ಲಿ 66 ಮಂದಿಗೆ ಈ ರೋಗ ತಗುಲಿತ್ತು ಮತ್ತು 45 ಮಂದಿ ಸಾವನ್ನಪ್ಪಿದರು. ಇದೇ ವರ್ಷ ಬಾಂಗ್ಲಾ ದೇಶದಲ್ಲಿಯ ಈ ರೋಗ ಉಲ್ಬಣಿಸಿ 56ರಲ್ಲಿ 50 ಮಂದಿ ಸಾವನ್ನಪ್ಪಿದರು. 2001 ರಿಂದ 2012 ರವರೆಗೆ ಸುಮಾರು 17 ಬಾರಿ ಈ ಬಾವಲಿ ಜ್ವರ ಭಾರತ ಮತ್ತು ಬಾಂಗ್ಲಾ ದೇಶದಲ್ಲಿ ಕಾಣಿಸಿಕೊಂಡಿದ್ದು ಸುಮಾರು 280 ಮಂದಿಗೆ ಈ ಜ್ವರ ತಗುಲಿ 211 ಮಂದಿ ಸಾವನ್ನಪ್ಪಿದ್ದಾರೆ ಎಂದು ದಾಖಲೆಗಳಲ್ಲಿ ಕಂಡು ಬಂದಿದೆ.

ಹೀಗೆ ಮಲೇಷಿಯಾ, ಬಾಂಗ್ಲಾ ದೇಶ, ಸಿಂಗಾಪುರ ಮತ್ತು ಭಾರತದಲ್ಲಿ ಕಳೆದ 20 ವರ್ಷಗಳಿಂದಲೂ ಈ ವೈರಾಣು ತೊಂದರೆ ನೀಡುತ್ತಲೇ ಇದೆ. ಇದೀಗ ಕೇರಳ ರಾಜ್ಯದ ಕೊಯಿಕ್ಕೋಡುನಲ್ಲಿ ತನ್ನ ರುದ್ರನರ್ತನ ಆರಂಭಿಸಿ, 10 ಮಂದಿಯನ್ನು ಆಪೋಷನ ತೆಗೆದುಕೊಂಡಿದೆ. ಸಾಕಷ್ಟು ಮುಂಜಾಗರೂಕತೆ ತೆಗೆದುಕೊಳ್ಳದಿದ್ದಲ್ಲಿ ಬಹುಬೇಗ ಎಲ್ಲೆಡೆ ಪಸರಿಸುವ ಸಾಧ್ಯತೆ ಇರುವುದರಿಂದ ತಕ್ಷಣವೇ ಜನರು ಮತ್ತು ಸರ್ಕಾರ ಎಚ್ಚೆತ್ತುಕೊಳ್ಳಬೇಕಾಗಿದೆ.

(ಲೇಖಕರ ಸಂಪರ್ಕ: 9845135787)